# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 136

05–12–2020 ರಂದು ಶನಿವಾರ ಬೆಳಿಗ್ಗೆ 12.00 ಘಂಟೆಗೆ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ವಾರ್ಡ್ ಹಂತದ ಸಮಿತಿ ಸಭೆಯನ್ನು ಡಾ॥ ಅಲ್ಲಮಪ್ರಭು. ಸಹಾಯಕ ನಿರ್ದೇಶಕರು, (ಪಶುಪಾಲನೆ–ಪಶ್ಚಿಮ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 136 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: 10–09–2020ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು. ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಡಾ. ಅಲ್ಲಮಪ್ರಭು ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು ಹಾಗೂ ಈ ಹಿಂದಿನ ಸಭೆಯ ನಡಾವಳಿಯ ನಿರ್ಣಯಗಳ ಬಗ್ಗೆ ಕೈಗೊಂಡ ಕಾರ್ಯವನ್ನು ಪರಿಶೀಲಿಸಲಾಯಿತು

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ಅಧ್ಯಕ್ಷರು ಕಮೀಟಿ ಸದಸ್ಯರಾದ ಶ್ರೀ ಉಮೇಶ್, ರವರು ಹಿಂದಿನ ಸಭೆಯಲ್ಲಿ ಪ್ರಸ್ಥಾಪಿಸಿರುವಂತೆ ಡಾ॥ ಬಾಬು ಜಗಜೀವನ್‌ರಾಂ ಉದ್ಯಾನವನವನ್ನು ಸಾರ್ವಜನಿಕರಿಗೆ ಪ್ರವೇಶದ ಅನುಕೂಲ ಮಾಡಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅದರಂತೆ ಸದರಿ ಡಾ॥ ಬಾಬು ಜಗಜೀವನ್‌ರಾಂ ಉದ್ಯಾನವನವನ್ನು ಸಾರ್ವಜನಿಕರಿಗೆ ಪ್ರವೇಶಕ್ಕೆ ಅನುಕೂಲ ಮಾಡಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ಕಮೀಟಿ ಸದಸ್ಯರಾದ ಶ್ರೀ ಮುಜಾಮೀಲ್ ಪಾಷ ರವರು ವಾರ್ಡ್ ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಚಿತಗಾರವನ್ನು ಹೊಸದಾಗಿ ನವೀಕರಿಸಲಾಗಿದ್ದು, ಸದರಿ ಚಿತಗಾರವನ್ನು ನಿರ್ವಹಣೆ ಮಾಡುವ ಬಗ್ಗೆ ಹಿಂದಿನ ಸಭೆಯಲ್ಲಿ ಕೋರಿದ್ದರು

ಅದರಂತೆ ಪರಿಶೀಲಿಸಿ ನಿರ್ವಹಣೆ ಮಾಡಲು ಮಾನ್ಯ ಶಾಸಕರು ಚಾಮರಾಜಪೇಟೆ ವಿಧಾನ ಸಭಾ ಕ್ಷೇತ್ರ ರವರು, ಮಾನ್ಯ ಜಂಟಿ ಆಯುಕ್ತರಿಗೆ ಪತ್ರವನ್ನು ನೀಡಿ ವಿದ್ಯುತ್ ಚಿತಗಾರದ ಸ್ವಚ್ಚತೆಗಾಗಿ 5 ಜನ ಕಾರ್ಮಿಕರನ್ನು ನಿಯೋಜಿಸಿಕೊಂಡು ಸ್ವಚ್ಚತಾ ಕಾರ್ಯವನ್ನು ನಿರ್ವಹಿಸಲು ಪತ್ರ ನೀಡಿರುತ್ತಾರೆ ಹಾಗೂ ಸದರಿ ಕಡತವು ಪ್ರಗತಿಯಲ್ಲಿರುವುದನ್ನು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಕಸವನ್ನು ಮೂಲ ಸ್ಥಳದಲ್ಲಿಯೇ ಹಸಿ ಮತ್ತು ಓಣ ಕಸವನ್ನು ವಿಂಗಡಿಸುವಂತೆ ಅರಿವು ಮೂಡಿಸಲು ಸಭೆಯಲ್ಲಿ ಸೂಚಿಸಿದರು.

---2

ಅಧ್ಯಕ್ಷರು: ಮನೆ ಮನೆಗಳಿಂದ ಹಾಗೂ ವಾಣಿಜ್ಯ ಸಂಕೀರ್ಣಗಳಿಂದ ದಿನ ನಿತ್ಯಾ ವಿಂಗಡಿಸಿದ ಕಸವನ್ನು ನೀಡುತ್ತೀರುವ ಬಗ್ಗೆ ಪರಿಶೀಲಿಸಿ ಖಾತ್ರಿ ಮಾಡಿಕೊಳ್ಳಲು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು : ವಾರ್ಡಿನಲ್ಲಿರುವ ಬ್ಲಾಕ್ ಸ್ಪಾಟ್‌ನಲ್ಲಿ ಕಸ ವಿಲೇವರಿ ಮಾಡುವ ಗಾಡಿಗಳನ್ನು ನಿಲ್ಲಿಸಿರುವುದರಿಂದ ಕಸದ ಸಂಗ್ರಾಹಣೆ ಹೆಚ್ಚಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿ ಸೂಕ್ತ ಕ್ರಮ ಕೈಗೊಳ್ಳಲು ಸಭೆಯಲ್ಲಿ ಸೂಚಿಸಿದರು.

ಅಧ್ಯಕ್ಷರು : ಪ್ರತಿ ದಿನ ಬೆಳಿಗ್ಗೆ ಬಿ.ಬಿಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿಯನ್ನು ಪಡೆದು ನೋಡಲ್ ಅಧಿಕಾರಿಗಳಿಗೆ ಸಲ್ಲಿಸುವಂತೆ ಸಭೆಯಲ್ಲಿ ಸೂಚಿಸಿದರು

ಮಾನ್ಯ ಆಧ್ಯಕ್ಷರಲ್ಲಿ ಕಿರಿಯ ಆರೋಗ್ಯ ಪರಿವೀಕ್ಷಕರು ಈ ಮೇಲ್ಕಂಡ ಪ್ರಶ್ನೆಗಳ ಬಗ್ಗೆ ಸಂಬಂಧಿಸಿದ ವಿವರಗಳನ್ನು ಅಧ್ಯಕ್ಷರ ಗಮನಕ್ಕೆ ತರುತ್ತಾ ಪ್ರತಿ ದಿನ ಪರಿಶೀಲಿಸಿ ಪೂರ್ಣ ಮಾಹಿತಿಯನ್ನು ತಮ್ಮ ಗಮನಕ್ಕೆ ತರುವುದಾಗಿ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು: ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ವಾರ್ಡ್ ವ್ಯಾಪ್ತಿಯಲ್ಲಿ ನೀರು ಮತ್ತು ಒಳಚರಂಡಿಗೆ ಸಂಬಂಧಿಸಿದ ದೂರುಗಳನ್ನು ದಾಖಲಿಸಿರುವ ದೂರು ಪುಸ್ತಕವನ್ನು ತೋರಿಸಿ ದೂರುಗಳನ್ನು ತುರ್ತಾಗಿ ನಿರ್ವಹಿಸಲು ಸೂಚಿಸಿದರು.

ಅಧ್ಯಕ್ಷರು: ಬಿ.ಡಬ್ಲ್ಯೂ. ಎಸ್. ಎಸ್. ಬಿ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ನಮ್ಮ ಕಛೇರಿಗೆ ಬರುವ ದೂರುಗಳನ್ನು ತುರ್ತಾಗಿ ನಿರ್ವಹಿಸುತ್ತಿದ್ದು ತಮ್ಮ ಕಛೇರಿಗೆ ಬರುವ ದೂರುಗಳನ್ನು ಸಹ ಅಧ್ಯತೆ ಮೇರೆಗೆ ಪರಿಹರಿಸುವುದಾಗಿ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು: ಬೆಸ್ಕಂ ಅಧಿಕಾರಿಗಳಿಗೆ ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ (ಬೆಸ್ಕಂ) ಗೆ ಸಂಬಂಧಿಸಿದ ದೂರುಗಳನ್ನು ದಾಖಲಿಸಿರುವ ದೂರು ಪುಸ್ತಕವನ್ನು ತೊರಿಸಿ ಸದರಿ ದೂರುಗಳನ್ನು ತುರ್ತಾಗಿ ನಿರ್ವಹಿಸಲು ಸೂಚಿಸಿದರು

ಬೇಸ್ಕಾಂ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿ ನಮ್ಮ ಕಛೇರಿಗೆ ಬರುವ ದೂರುಗಳನ್ನು ತುರ್ತಾಗಿ ನಿರ್ವಹಿಸುತ್ತಿದ್ದು ತಮ್ಮ ಕಛೇರಿಗೆ ಬರುವ ದೂರುಗಳನ್ನು ಸಹ ಅಧ್ಯತೆ ಮೇರೆಗೆ ಪರಿಹರಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು : ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಾಂಕ್ರಮಿಕ ರೋಗವನ್ನು ತಡೆಯಲು ಔಷಧಿಯು (ಲಸಿಕೆ) ಬರುವ ಸಾಧ್ಯತೆ ಇದ್ದು ಸರ್ಕಾರದ ನಿಯಮನುಸಾರ ಪಾಲಿಸಿ ತ್ವರಿತ ಔಷಧಿಯನ್ನು (ಲಸಿಕೆ) ಸಂಗ್ರಹಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಿದರುಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ತಿಳಿಸಿದರು.

ಅಧ್ಯಕ್ಷರು ಕೋವಿಡ್-19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟಲು ಮುಖಗವಸವನ್ನು ಕಡ್ಡಾಯವಾಗಿ ಬಳಸಲು ಕ್ರಮ ವಹಿಸುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿಲಾಯಿತು

-----3

ಆರೋಗ್ಯ ವೈದ್ಯಾಧಿಕಾರಿಗಳು: ಸರ್ಕಾರದ ಆದೇಶದಂತೆ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಮುಖಗವಸುಗಳನ್ನು ಬಳಸದೇ ಇರುವವರಿಗೆ ಸೂಕ್ತ ದಂಡವನ್ನು ವಿಧಿಸುವುದನ್ನು ಪೋಲೀಸ್ ಇಲಾಖೆಗೆ ವಹಿಸಿರುವುದರಿಂದ ಪೋಲೀಸ್ ಇಲಾಖೆ ಸೂಕ್ತ ಕ್ರಮ ಕೈಗೊಳ್ಳುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು ಹಾಗೂ ಸರ್ಕಾರಿ ಆದೇಶದಂತೆ ಕೋವಿಡ್-19 ಔಷಧಿ (ಲಸಿಕೆ) ವಿತರಣೆಯನ್ನು ಮಾಡಲು ಕ್ರಮ ಕೈಗೊಳ್ಳುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ವಾರ್ಡ್ ನಂ. 136 ರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೂತ್ ಮಟ್ಟದ ಅಧಿಕಾರಿಗಳ ಹಾಜರಾತಿ ಪುಸ್ತಕವನ್ನು ಹಾಜರುಪಡಿಸುವಂತೆ ಕಂದಾಯ ಪರಿವೀಕ್ಷಕರಿಗೆ ಕೋರಿದರು.

ಕಂದಾಯ ಪರಿವೀಕ್ಷಕರು ಬೂತ್ ಮಟ್ಟದ ಅಧಿಕಾರಿಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ನೀಡಿದರು ಹಾಗೂ ಎಲ್ಲಾರು ಹಾಜರಾಗಿ ಸೂಕ್ತ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು : ಕಂದಾಯ ಪರಿವೀಕ್ಷಕರಿಗೆ ಮುಂದಿನ ದಿನಗಳಲ್ಲಿ ಬಿ.ಬಿ.ಎಂ.ಪಿ ಎಲೆಕ್ಷನ್ ಬರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಮತದಾರರ ಪಟ್ಟಿ ತಿದ್ದುಪಡಿ ಮಾಡಿಕೊಳ್ಳುವುವ ಬಗ್ಗೆ ಬಿ.ಬಿ.ಎಂ.ಪಿ ನಿಯಮ ಪಾಲಿಸುವಂತೆ ಸಭೆಯಲ್ಲಿ ತಿಳಿಸಿದರು.

ಕಂದಾಯ ಪರಿವೀಕ್ಷಕರು ಮತದಾರರ ಗುರ್ತಿನ ಚೀಟಿಯ ಕರಡು ಪ್ರತಿ ತಯಾರಾಗುತ್ತಿದ್ದು ನಂತರ ಬಿ.ಬಿ.ಎಂ.ಪಿ ನಿಯಮಾನುಸಾರ ಕಾರ್ಯನಿರ್ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು

ಅಧ್ಯಕ್ಷರು: ತೆರಿಗೆ ಪಾವತಿ ಮಾಡದೆ ಬಾಕಿ ಉಳಿಸಿಕೊಂಡಿರುವ ಆಸ್ತಿ ದಾರರಿಗೆ ಬಾಕಿ ತೆರಿಗೆ ವಸೂಲಾತಿ ಮಾಡಲು ಬಿ.ಬಿ.ಎಂ.ಪಿ ಆದೇಶದಂತೆ ನೋಟಿಸ್ ಜಾರಿ ಮಾಡಿ ಕ್ರಮ ಕೈಗೊಳ್ಳಲು ಸೂಚಿಸಿದರು

ಕಂದಾಯ ಪರಿವೀಕ್ಷಕರು ಬಿ.ಬಿ.ಎಂ.ಪಿ ಆದೇಶದಂತೆ ಈಗಾಗಲೇ ಹಲವರಿಗೆ ನೋಟಿಸ್ ಜಾರಿ ಮಾಡಿದ್ದು, ತೆರಿಗೆ ವಸೂಲಾತಿಯನ್ನು ಮಾಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಕಮಿಟಿ ಸದಸ್ಯರು ವಾರ್ಡ್ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ/ಪಂಗಡ, ಬಿಸಿಎಂ ಮತ್ತು ಆರ್ಥಿಕವಾಗಿ ಹಿಂದುಳಿದಿರುವ ಪಂಗಡದವರಿಗೆ ಬಿ.ಬಿ.ಎಂ.ಪಿ ವತಿಯಿಂದ 2020-21ನೇ ಸಾಲಿನಲ್ಲಿ ವ್ಯಯಕ್ತಿಕ ಮನೆ ನಿರ್ಮಾಣಕ್ಕೆ ಅನುದಾನ ಬಿಡುಗಡೆಯಾಗದಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅದೇ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸದಸ್ಯರು ವಾರ್ಡ್ ಸಂಖ್ಯೆ: 136ರ ವ್ಯಾಪ್ತಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪರಿಶಿಷ್ಟಜಾತಿ/ಪಂಗಡ, ಹಿಂದುಳಿದ ಅಲ್ಪ ಸಂಖ್ಯಾತರು ವಾಸಿಸುತ್ತಿದ್ದು ಸದರಿ ಅರ್ಜಿ ಸಲ್ಲಿಸಿರುವ ಅರ್ಜಿದಾರರ ಮನೆಗಳು ಶಿಥಿಲವಸ್ಥೆಯಲ್ಲಿದ್ದು ಅರ್ಜಿ ಸಲ್ಲಿಸಿದ ಎಲ್ಲರಿಗೆ ಕಾರ್ಯದೇಶ ಕೊಡಿಸುವಂತೆ ಅಧ್ಯಕ್ಷರಲ್ಲಿ ಮನವಿ ಮಾಡಿಕೊಂಡರು.

ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಮತ್ತು ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ 2020-21 ಸಾಲಿನಲ್ಲಿ ಅರ್ಜಿ ಸಲ್ಲಿಸಿರುವ ವಿವರಣೆಯನ್ನು ಸಭೆಯಲ್ಲಿ ತಿಳಿಸುತ್ತಾ 2020-21ನೇ ಸಾಲಿನ ಆಯವ್ಯಯದಲ್ಲಿ ಪ್ರತಿ ವಾರ್ಡ್‌ಗಳಿಗೆ ಮೀಸಲಿಟ್ಟಿರುವ ಅನುದಾನಕ್ಕೆ ತಕ್ಕಂತೆ ಫಲಾನುಭವಿಗಳನ್ನು ಗುರ್ತಿಸಲು ಪರಿಶೀಲಿಸಿ ಕಡತವನ್ನು ಮೇಲಾಧಿಕಾರಿಗಳಿಗೆ ಸಲ್ಲಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು

## ಹಾಜರಿದ್ದ ವಾರ್ಡ್ ಕಮೀಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮೀತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ॥ ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ)<br>ಬಿ.ಬಿ.ಎಂ.ಪಿ. | ವಾರ್ಡ್‌ನ ನೋಡಲ್ ಅಧಿಕಾರಿ | [signature] 5/12/20 |
| 2 | ಶ್ರೀ ಗಿರಿಧರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್. ದೂ. 9986537126<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -136 | ಸದಸ್ಯರು | [signature] |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ)<br>ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಾಜಪೇಟೆ ವಿಭಾಗ ರವರ<br>ಪ್ರತಿನಿಧಿ. ಗೀತಾ ಹೆಚ್. ದೂ. 9986537126 | ಸದಸ್ಯರು | [signature] |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 873557760 | ಸದಸ್ಯರು | [signature] |
| 7 | ಶ್ರೀ ಮೊಹಮದ್ ಮುಜಾಮೀಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 7349649906 | ಸದಸ್ಯರು | [signature] |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | Kala |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ)<br>ರವರ ಪ್ರತಿನಿಧಿಎನ್ ಗೀತಾ ಹೆಚ್. ದೂ. 9986537126 | ಸದಸ್ಯರು | [signature] |

| | | | |
|---|---|---|---|
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ ಹನುಮಂತ ರಾಜು 8618556909 | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ ಪ್ರತಿನಿಧಿ | ಸದಸ್ಯರು | |

I/C. Assistant Engineer
O&M-8, GORIPALYA
W-3, SUB DIVISION

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮಿತಿ

ಅಧ್ಯಕ್ಷರು 5/12/2020.
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136

<u>ಪ್ರತಿಯನ್ನು</u>

1. ಜಂಟಿ ಆಯುಕ್ತರು ಪಶ್ಚಿಮ ರಚರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ